# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 341 (357)
ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ. ಎಂ. ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 07.12.2023
ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಅನುಷ್ಠಾನ ಯಾವಾಗ ಆಗಲಿದೆ; | ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟವನ್ನು ಆರ್.ಎಲ್. 519.60 ಮೀ. ನಿಂದ ಆರ್.ಎಲ್. 524.256 ಮೀ.ರವರೆಗೆ ಎತ್ತರಿಸುವಿಕೆ ಹಾಗೂ ನೀರಿನ ಬಳಕೆ ಕೇಂದ್ರ ಸರ್ಕಾರದಿಂದ ಹೊರಡಿಸುವ ಕೃಷ್ಣಾ ನ್ಯಾಯಾಧೀಕರಣ–2ರ ಅಂತಿಮ ತೀರ್ಪಿನ ಅಧಿಸೂಚನೆಗೆ ಒಳಪಟ್ಟಿರುತ್ತದೆ.<br><br>ಆದಾಗ್ಯೂ, ಪೂರ್ವಬಾವಿಯಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಯೋಜನೆಯ ರೂ.51,148.94 ಕೋಟಿ (2014–15ರ ದರಪಟ್ಟಿ)ಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಇದುವರೆಗೂ ರೂ.16,900.00 ಕೋಟಿ ವೆಚ್ಚ ಮಾಡಲಾಗಿರುತ್ತದೆ. |
| ಆ) | ಈ ಯೋಜನೆಗೆ ಮೀಸಲಿಟ್ಟಿರುವ ಹಣವೆಷ್ಟು; | |
| ಇ) | ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಯಾವ ಕಾಲಮಿತಿಯನ್ನು ಹಮ್ಮಿಕೊಳ್ಳಲಾಗಿದೆ. | ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಅನುಷ್ಠಾನವು ಕೇಂದ್ರ ಸರ್ಕಾರದಿಂದ ಕೃಷ್ಣಾ ನ್ಯಾಯಾಧೀಕರಣ–2ರ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆ ಹೊರಡಿಸುವ ಷರತ್ತಿಗೆ ಒಳಪಟ್ಟಿದೆ.<br><br>ಆದಾಗ್ಯೂ ಕೃಷ್ಣಾ ನದಿಯು ಮಳೆಗಾಲದಲ್ಲಿ ಪ್ರವಾಹದಿಂದ ಹರಿದು ಬರುವ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಕರ್ನಾಟಕದಲ್ಲಿ ಸದ್ಬಳಕೆ ಮಾಡಲು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3 ರಡಿ ಬರುವ ಉಪಯೋಜನೆಗಳ ಕಾಲುವೆ ಜಾಲವು ಗುರುತ್ವಾಕರ್ಷಣೆಯಿಂದ/ಲಿಫ್ಟ್ ಮುಖಾಂತರ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಬರುವ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ನೀರು ತುಂಬಿಸಲಾಗುತ್ತಿದ್ದು ಇದರಿಂದ ಉತ್ತರ ಕರ್ನಾಟಕದ ಬರ ಪೀಡಿತ ಭಾಗಗಳಿಗೆ ಕುಡಿಯುವ ನೀರು ಮತ್ತು ಜನ ಜಾನುವಾರುಗಳಿಗೆ ನೀರಿನ ಸೌಲಭ್ಯ ಸಹಕಾರಿಯಾಗಲಿದೆ.<br><br>ಕೃಷ್ಣಾ ನ್ಯಾಯಾಧೀಕರಣ–2ರ ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಅಧಿಸೂಚನೆ ಶೀಘ್ರವಾಗಿ ಹೊರಡಿಸಲು ಕೇಂದ್ರ ಸರ್ಕಾರದ ಜೊತೆಗೆ ಸಮನ್ವಯ ಸಾಧಿಸಲಾಗುತ್ತಿದೆ. |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಈ) | ರಾಮದುರ್ಗದಲ್ಲಿ ವೀರಭದ್ರೇಶ್ವರ ಯೋಜನೆ, ಕೆರೆ ಮರುಪೂರ್ಣ ಯೋಜನೆಗಳು ಸೇರಿದಂತೆ ವಿವಿಧ ಏತ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ವೀರಭದ್ರೇಶ್ವರ ಏತ ನೀರಾವರಿ ಯೋಜನೆಯ ರೂ.544.00 ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಯನ್ನು Turnkey ಆಧಾರದ ಮೇಲೆ ಗುತ್ತಿಗೆಯನ್ನು ವಹಿಸಲಾಗಿರುತ್ತದೆ. ಈವರೆವಿಗೂ ರೂ.126.47 ಕೋಟಿ ಮೊತ್ತದ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ.<br>ಸಾಲಾಪುರ ಏತ ನೀರಾವರಿ ಯೋಜನೆಯ ರೂ.566.00 ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಹೆಡ್ ವರ್ಕ್ ಕಾಮಗಾರಿಯನ್ನು ಗುತ್ತಿಗೆ ಆಧಾರದ ಮೇಲೆ ವಹಿಸಿಕೊಡಲಾಗಿರುತ್ತದೆ. ಈವರೆವಿಗೂ ರೂ.236.66 ಕೋಟಿ ಮೊತ್ತದ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. |
| ಉ) | ಈ ಯೋಜನೆಗಳಿಗೆ ಸರ್ಕಾರ ಎಷ್ಟು ಹಣ ಮೀಸಲಿಟ್ಟಿದೆ; ಈ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಯಾವ ಕಾಲಮಿತಿಯನ್ನು ಹಮ್ಮಿಕೊಂಡಿದೆ? | ಪ್ರಸಕ್ತ ಆರ್ಥಿಕ ವರ್ಷದಲ್ಲಿ ಸದರಿ ಯೋಜನೆಗಳಿಗೆ ತಲಾ ರೂ.50.00 ಕೋಟಿಗಳನ್ನು ಮೀಸಲಿಡಲಾಗಿದ್ದು, ಅನುದಾನ ಲಭ್ಯತೆಯನುಸಾರ ಯೋಜನೆಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು. |

**ಸಂಖ್ಯೆ: ಜಸಂಇ 123 ಡಬ್ಲ್ಯೂಬಿಎಂ 2023**

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**